ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

"ವಾರ್ತಾ ಭವನ", ನ್ಯಾಯಾಲಯ ಆವರಣ, ಬೆಳಗಾವಿ-590002. (ದೂರವಾಣಿ ಸಂ: 0831-2420344)

ಅಭಿನಂದನೆಗಳೊಂದಿಗೆ ಪ್ರಕಟಣೆಯ ಕೃಪೆಗಾಗಿ ದಿನಾಂಕ: **17-12-2018**

ಇ-ಮೇಲ್:- varthabhavanbelagavi@gmail.com ಚಳಿಗಾಲ ಅಧಿವೇಶನ-2018 ಸುವರ್ಣ ವಿಧಾನ ಸೌಧ, ಬೆಳಗಾವಿ

**ಪತ್ರಿಕಾ ಪ್ರಕಟಣೆ**

## ಸಂಸ್ಕರಣಾ ಘಟಕದ ಸ್ಫೋಟದಲ್ಲಿ ಮೃತರಾದವರ ಕುಟುಂಬಗಳಿಗೂ ಐದು ಲಕ್ಷ ರೂ ಪರಿಹಾರ : ಡಾ ಜಿ ಪರಮೇಶ್ವರ್

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):**

ಬಾಗಲಕೋಟೆ ಜಿಲ್ಲೆಯ ಖಾಸಗಿ ಸಕ್ಕರೆ ಕಾರ್ಖಾನೆಯ ಸಂಸ್ಕರಣಾ ಘಟಕದಲ್ಲಿ ಭಾನುವಾರ ನಡೆದ ಸ್ಪೋಟ ಪ್ರಕರಣದಲ್ಲಿ ಮೃತರಾದ ನಾಲ್ವರ ಕುಟುಂಬಗಳಿಗೂ ಕೂಡಾ ರಾಜ್ಯ ಸರ್ಕಾರ ತಲಾ ಐದು ಲಕ್ಷ ರೂ. ಪರಿಹಾರವನ್ನು ನೀಡಲಿದೆ ಎಂದು ಗೃಹ ಖಾತೆಯನ್ನು ಹೊತ್ತ ಉಪ ಮುಖ್ಯಮಂತ್ರಿ ಡಾ ಜಿ ಪರಮೇಶ್ವರ್ ಅವರು ರಾಜ್ಯ ವಿಧಾನ ಸಭೆಯಲ್ಲಿ ಸೋಮವಾರ ಪ್ರಕಟಿಸಿದರು.

ಶಿವಮೊಗ್ಗ ಗ್ರಾಮಾಂತರ ವಿಧಾನ ಸಭಾ ಕ್ಷೇತ್ರದ ಮಾಜಿ ಶಾಸಕ ಕರಿಯಣ್ಣ ಅವರ ನಿಧನಕ್ಕೆ ಮಾತ್ರವಲ್ಲದೆ ಕಳೆದ ಎರಡು ದಿನಗಳಲ್ಲಿ ರಾಜ್ಯದಲ್ಲಿ ನಡೆದ ಎರಡು ಪ್ರತ್ಯೇಕ ದುರಂತಗಳಲ್ಲಿ ಸಾವನ್ನಪ್ಪಿದ ಜನರಿಗೆ ಇಂದು ಸದನದ ಕಲಾಪ ಪ್ರಾರಂಭಕ್ಕೂ ಮುನ್ನ ಸಭಾಧ್ಯಕ್ಷ ಕೆ. ಆರ್. ರಮೇಶ್‍ಕುಮಾರ್ ಸಂತಾಪ ಸೂಚಕ ನಿರ್ಣಯವನ್ನು ಮಂಡಿಸಿದರು.

ಚಾಮರಾಜ ನಗರ ಜಿಲ್ಲೆಯ ಹನೂರು ತಾಲೂಕಿನ ಸುಳ್ವಾಡಿ ಗ್ರಾಮದ ಕಿಚಗುತ್ ಮಾರಮ್ಮ ದೇವಸ್ಥಾನ ಗೋಪುರದ ಶಿಲಾನ್ಯಾಸ ಸಮಾರಂಭದಲ್ಲಿ ವಿತರಿಸಲಾದ ಪ್ರಸಾದವನ್ನು ಸೇವಿಸಿ ಇಬ್ಬರು ಮಕ್ಕಳೂ ಒಳಗೊಂಡಂತೆ ಒಟ್ಟು ಹದಿನಾಲ್ಕು ಜನ ಸಾವನ್ನಪ್ಪಿದ್ದಾರೆ. ಇನ್ನೂ 108 ಜನರು ಮೈಸೂರು ಭಾಗದ 13 ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರೆಲ್ಲರೂ ಬೇಗ ಗುಣಮುಖರಾಗಲಿ. ಮೃತರ ಕುಟುಂಬಗಳಿಗೆ ಆರ್ಥಿಕ ನೆರವು ಒದಗಿಸುವುದರ ಜೊತೆಗೆ ಧೈರ್ಯ ತುಂಬುವ ಕಾರ್ಯವನ್ನು ಸರ್ಕಾರ ಮಾಡಲಿ ಎಂದು ಸಭಾಧ್ಯಕ್ಷರು ಹೇಳಿದರು.

ಸಭಾಧ್ಯಕ್ಷರು ಮಂಡಿಸಿದ ಸಂತಾಪ ಸೂಚಕ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದ ಉಪ ಮುಖ್ಯಮಂತ್ರಿ ಡಾ ಜಿ.ಪರಮೇಶ್ವರ್ ಅವರು ಚಾಮರಾಜನಗರ ಜಿಲ್ಲೆಯ ದೇವಸ್ಥಾನದಲ್ಲಿ ನಡೆದ ದುರ್ಘಟನೆಯ ತನಿಖೆಗೆ ಆದೇಶಿಸಲಾಗಿದೆ. ಸಾವಿಗೆ ಕಾರಣವಾದ ಪ್ರಸಾದವನ್ನು ಈಗಾಗಲೇ ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ. ಪ್ರಾಥಮಿಕ ಪರೀಕ್ಷೆಯಲ್ಲಿ ಪ್ರಸಾದದಲ್ಲಿ ಕೀಟನಾಶಕದಲ್ಲಿ ಕಂಡು ಬರುವ ಮಾನೋಪ್ರೋಟ್ ರಾಸಾಯನಿಕ ಅಂಶವಿದೆ ಎಂದು ತಿಳಿದು ಬಂದಿದೆ. ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಬಂದ ಬಳಿಕ ಇತರೆ ಅಂಶಗಳೂ ಬೆಳಕಿಗೆ ಬರಲಿವೆ. ಪ್ರಕರಣ ಕುರಿತಂತೆ ಈಗಾಗಲೇ ತನಿಖೆ ಪ್ರಾರಂಭಿಸಿ ಏಳು ಜನರನ್ನು ವಶಕ್ಕೆ ತೆಗೆದುಕೊಂಡು ವಿಚಾರಣೆ ನಡೆಸಲಾಗುತ್ತಿದೆ.

ಕೆಲವರು ಹಳ್ಳಿಯನ್ನು ತೊರೆದಿದ್ದು, ಅವರಿಗಾಗಿ ಶೋಧ ಕಾರ್ಯ ಕೂಡಾ ಪ್ರಾರಂಭವಾಗಿದೆ. ಸರ್ಕಾರ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿದೆ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸದನಕ್ಕೆ ತಿಳಿಸಿದರು.

ಪ್ರತಿಪಕ್ಷ ನಾಯಕ ಬಿ. ಎಸ್. ಯಡಿಯೂರಪ್ಪ ಅವರು ಮಾತನಾಡಿ ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ಮಾಜಿ ಶಾಸಕ ಕರಿಯಣ್ಣ ಅವರನ್ನು ತಮ್ಮ ಆತ್ಮೀಯ ಗೆಳೆಯರಲ್ಲೊಬ್ಬರಾಗಿದ್ದರು ಎಂದು ಬಣ್ಣಿಸಿದರು.

ಸುಳ್ವಾಡಿ ದುರ್ಘಟನೆ ಕುರಿತು ನಿಷ್ಪಕ್ಷಪಾತ ತನಿಖೆ ನಡೆದು ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು. ಮಾನವೀಯತೆಯ ದೃಷ್ಟಿಯಿಂದ ಸಕ್ಕರೆ ಕಾರ್ಖಾನೆಯ ದುರಂತದಲ್ಲಿ ಮಡಿದವರ ಕುಟುಂಬಗಳಿಗೂ ಸರ್ಕಾರ ಪರಿಹಾರ ನೀಡಬೇಕು ಎಂದು ತಮ್ಮ ಮನದಾಳದ ಮಾತುಗಳನ್ನು ಹೊರಹಾಕಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಭಾರತೀಯ ಜನತಾ ಪಕ್ಷದ ನಾಯಕ ಹಾಗೂ ಮುಧೋಳ ಕ್ಷೇತ್ರದ ಶಾಸಕ ಗೋವಿಂದ ಕಾರಜೋಳ ಅವರು ಸುಳ್ವಾಡಿ ದುರಂತದಲ್ಲಿ ಮಡಿದವರ ಕುಟುಂಬಗಳಿಗೆ ರಾಜ್ಯ ಸರ್ಕಾರ ಐದು ಲಕ್ಷ ರೂ. ಪರಿಹಾರವನ್ನು ಘೋಷಿಸಿದೆ. ಇದರ ಜೊತೆಗೆ ಸರ್ಕಾರದ ವಿವಿಧ ಯೋಜನೆಗಳಡಿ ದೊರೆಯುವ ಸವಲತ್ತುಗಳನ್ನೂ ವಿಸ್ತರಿಸುವಲ್ಲಿ ಕ್ರಮಕೈಗೊಳ್ಳಲು ಮುಂದಾಗಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದರು.

ಸುಳ್ವಾಡಿ ಪ್ರಕರಣದ ಕರಾಳ ನೆನಪು ಮಾಸುವ ಮುನ್ನವೇ ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ಕುಳಲಿ ಗ್ರಾಮದ ಸಮೀಪ ಶಾಸಕ ಮುರುಗೇಶ್ ನಿರಾಣಿ ಅವರ ಒಡೆತನಕ್ಕೆ ಸೇರಿದ ಸಕ್ಕರೆ ಕಾರ್ಖಾನೆಯಲ್ಲಿ ಪ್ರಾಯೋಗಿಕವಾಗಿ ಪರೀಕ್ಷೆ ನಡೆಸುತ್ತಿದ್ದ ಸಂದರ್ಭದಲ್ಲಿ ತ್ಯಾಜ್ಯ ವಸ್ತು ನಿರ್ವಹಣೆಯ ಮಿಥೇನ್ ಗ್ಯಾಸ್‌ನ ಸುರಕ್ಷತಾ ಕವಾಟ (ಸೇಫ್ಟಿವಾಲ್ವ್) ದಲ್ಲಿ ಉಂಟಾದ ಸಮಸ್ಯೆಯಿಂದ ಸ್ಫೋಟ ಉಂಟಾಗಿ ನಾಲ್ಕು ಜನ ಮೃತ ಪಟ್ಟಿರುವುದು ಖೇದಕರ ಸಂಗತಿಯಾಗಿದೆ. ಮೃತರ ಆತ್ಮಕ್ಕೆ ಶಾಂತಿ ಲಭಿಸಲಿ ಹಾಗೂ ಅವರ ಕುಟುಂಬಗಳಿಗೆ ಮೃತರ ಅಗಲಿಕೆಯಿಂದ ಉಂಟಾದ ನೋವನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಅವರು ಭಗವಂತನಲ್ಲಿ ಪ್ರಾರ್ಥಿಸಿದರು.

ಹನೂರು ಶಾಸಕ ಆರ್. ನಾಗೇಂದ್ರ ಅವರು ತಮ್ಮ ಕ್ಷೇತ್ರದ ವ್ಯಾಪ್ತಿಯಲ್ಲಿನ ಸುಳ್ವಾಡಿಯ ಮಾರಮ್ಮ ದೇವಸ್ಥಾನ ಖಾಸಗಿ ಒಡೆತನಕ್ಕೆ ಸೇರಿದೆ. ಗೋಪುರ ನಿರ್ಮಾಣದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಹದಿನೈದು ಕೆ.ಜಿ. ಅಕ್ಕಿಯನ್ನು ಬಳಸಿ ತಯಾರಿಸಿದ ಪ್ರಸಾದವನ್ನು ಜನರಿಗೆ ಹಂಚಲಾಗಿತ್ತು. ಪ್ರಸಾದ ತಿಂದವರು ಅಸ್ವಸ್ಥರಾಗಿ ಸಾವನ್ನಪ್ಪುತ್ತಿದ್ದಾರೆ ಎಂಬ ಮಾಹಿತಿ ತಿಳಿಯುತ್ತಿದ್ದಂತೆಯೇ, ಪ್ರಕರಣದ ಗಂಭೀರತೆಯನ್ನು ಮನಗಂಡು ವಿಷಯವನ್ನು ಮುಖ್ಯಮಂತ್ರಿಯವರ ಗಮನಕ್ಕೆ ತಂದಾಗ, ಮುಖ್ಯಮಂತ್ರಿಯವರು ಕೂಡಲೇ ಸ್ಪಂದಿಸಿ ಸರ್ಕಾರಿ ಆಸ್ಪತ್ರೆಗಳ ಜೊತೆಗೆ ಖಾಸಗಿ ಆಸ್ಪತ್ರೆಗಳಲ್ಲೂ ಚಿಕಿತ್ಸೆ ಪಡೆಯಲು ಅನುಕೂಲ ಮಾಡಿಕೊಟ್ಟರು. ಇಲ್ಲವಾದಲ್ಲಿ ಸಾವಿನ ಪ್ರಮಾಣ ಮತ್ತಷ್ಟು ಹೆಚ್ಚಾಗುತ್ತಿತ್ತು. ಖಾಸಗಿ ಆಸ್ಪತ್ರೆಗಳ ವೈದ್ಯರೂ ಕೂಡಾ ಹಣದ ಬಗ್ಗೆ ಚಿಂತಿಸದೆ ಸಕಾಲಿಕ ಚಿಕಿತ್ಸೆ ನೀಡಿ ಮಾನವೀಯತೆ ಮೆರೆದಿದ್ದಾರೆ ಎಂದು ತಿಳಿಸಿದರು.

ಇಂತಹ ದುರ್ಘಟನೆಗಳು ಎಂದೂ ಎಲ್ಲೂ ಮರುಕಳಿಸಬಾರದು. ಆದಕಾರಣ, ಸರ್ಕಾರ ಎಲ್ಲಾ ರೀತಿಯ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಸಲಹೆ ನೀಡಿದ ಸಭಾಧ್ಯಕ್ಷರು ಚರ್ಚೆಗೆ ತೆರೆ ಎಳೆದರು.

**************

ವಾವಿಸಂ.01

## ಕೊಡಗು ಸೇರಿದಂತೆ ಪ್ರವಾಹ ಪೀಡಿತ ಎಂಟು ಜಿಲ್ಲೆಗಳ ರೈತರ ಖಾತೆಗಳಿಗೆ ಪರಿಹಾರ : ಆರ್.ವಿ.ದೇಶಪಾಂಡೆ

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):** ಆಗಸ್ಟ್ 2018 ರಲ್ಲಿ ಉಂಟಾದ ಪ್ರವಾಹ ಹಾಗೂ ಭೂ–ಕುಸಿತದಿಂದ ಕೊಡಗು ಸೇರಿದಂತೆ ರಾಜ್ಯದ ಎಂಟು ಜಿಲ್ಲೆಗಳಲ್ಲಿ ಉಂಟಾಗಿರುವ ತೋಟಗಾರಿಕೆ ಬೆಳೆಗಳ ನಷ್ಟ ಹಾಗೂ ಮೂಲಸೌಕರ್ಯ ಹಾನಿಗಳಿಗೆ 722.06 ಕೋಟಿ ರೂ. ಪರಿಹಾರ ಕೋರಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದ ಬೇಡಿಕೆಯ ಈ ಪೈಕಿ 546.21 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಈ ಮೊತ್ತದಲ್ಲಿ ರೈತರ ಖಾತೆಗಳಿಗೆ ಪರಿಹಾರ ಜಮಾ ಮಾಡಲು ಕ್ರಮಕೈಗೊಳ್ಳಲಾಗಿದೆ ಎಂದು ಕಂದಾಯ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತಾ ಮತ್ತು ಜೀವನೋಪಾಯ ಸಚಿವ ಆರ್. ವಿ.ದೇಶಪಾಂಡೆ ಅವರು ತಿಳಿಸಿದ್ದಾರೆ.

ರಾಜ್ಯ ವಿಧಾನಸಭೆಯಲ್ಲಿ ಸೋಮವಾರ ಪ್ರಶ್ನೋತ್ತರ ಕಲಾಪ ವೇಳೆ ಶಾಸಕ ಕೆ. ಜಿ. ಬೋಪಯ್ಯ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಕೊಡಗು ಸೇರಿದಂತೆ ಪ್ರವಾಹ ಪೀಡಿತ ಎಂಟು ಜಿಲ್ಲೆಗಳಲ್ಲಿ ಹಾನಿಗಳಿಗಾಗಿ ರಾಷ್ಟ್ರೀಯ ಪ್ರಕೃತಿ ವಿಕೋಪ ನಿಧಿ (ಎನ್.ಡಿ.ಆರ್.ಎಫ್) ಯ ಮಾರ್ಗಸೂಚಿಗಳನ್ವಯ ಕೋರಲಾದ ಪರಿಹಾರದ ಪ್ರಸ್ತಾವನೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು 546.21 ಕೋಟಿ ರೂ. ಅನುದಾನ ಮಂಜೂರು ಮಾಡಿದೆ. ಈ ಮೊತ್ತವನ್ನು ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಪರಿಹಾರವನ್ನು ವಿತರಿಸಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕೊಡಗು ಜಿಲ್ಲೆಗೆ ಸಂಬಂಧಿಸಿದ ತುರ್ತು ಕಾಮಗಾರಿಗಳಿಗೆ 25 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಅಲ್ಲದೆ, ವಿವಿಧ ಇಲಾಖೆಗಳ ಮೂಲಕ ಮೂಲಸೌಕರ್ಯ ಕಾಮಗಾರಿಗಳ ಅನುಷ್ಠಾನಗೊಳಿಸಲು 85 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಸಚಿವರು ವಿವರಿಸಿದರು.

ಕೊಡಗು ಜಿಲ್ಲೆಯಲ್ಲಿ ಸುಮಾರು 302 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಅಂತೆಯೇ, ಈ ಕಾಮಗಾರಿಗಳನ್ನು ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ 4 (ಜಿ) ವಿನಾಯತಿ ನೀಡಲಾಗಿದೆ. ಅಲ್ಲದೆ ಉತ್ತಮ ಗುಣಮಟ್ಟದ ಸೇವೆಯಲ್ಲಿ ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಸಂಗ್ರಹಣಾ ಪ್ರಾಧಿಕಾರವು ದೃಢಪಡಿಸಿಕೊಳ್ಳಲು ಸೂಚಿಸಲಾಗಿದೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಮಟ್ಟದ ಸಮಿತಿಗಳಲ್ಲಿ ಸಂಬಂಧಪಟ್ಟ ಇಲಾಖೆಗಳ ಕ್ರಿಯಾಯೋಜನೆಗಳನ್ನು ಅನುಮೋದನೆ ಪಡೆದ ನಂತರ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಆರ್. ವಿ. ದೇಶಪಾಂಡೆ ಅವರು ಮಾಹಿತಿ ನೀಡಿದರು.

********

ವಾವಿಸಂ.01

## ಕೆಜಿಎಫ್‌ನಲ್ಲಿ ಕೈಗಾರಿಕಾ ಪ್ರದೇಶ ಸ್ಥಾಪನೆಗೆ ಚಿಂತನೆ : ಕೆ.ಜೆ.ಜಾರ್ಜ್

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):** ಕೋಲಾರ ಜಿಲ್ಲೆಯ ಕೋಲಾರ್ ಗೋಲ್ಡ್ ಫೀಲ್ಡ್ಸ್ (ಕೆ ಜಿ ಎಫ್) ನ ಭಾರತ್ ಗೋಲ್ಡ್ ಮೈನ್ಸ್ ಲಿಮಿಟೆಡ್ (ಬಿ ಜಿ ಎಂ ಎಲ್) ಸ್ಥಗಿತಗೊಂಡಿವುದರಿಂದ ಅಲ್ಲಿನ ನಿರುದ್ಯೋಗಿ ಕಾರ್ಮಿಕರಿಗೆ ಅನುಕೂಲ ಕಲ್ಪಿಸಲು ತುಮಕೂರು ಮಾದರಿಯಲ್ಲಿಯೇ ಕೆ ಜಿ ಎಫ್ ನಲ್ಲೂ ಕೈಗಾರಿಕಾ ಅವಕಾಶಗಳನ್ನು ಸೃಜಿಸಲು ಉದ್ದೇಶಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ,

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಕೆ. ಜೆ. ಜಾರ್ಜ್ ಅವರು ತಿಳಿಸಿದ್ದಾರೆ.

ರಾಜ್ಯ ವಿಧಾನಸಭೆಯಲ್ಲಿ ಇಂದು ಪ್ರಶ್ನೋತ್ತರ ಕಲಾಪ ವೇಳೆ ಶಾಸಕಿ ಎಂ. ರೂಪಕಲಾ ಅವರ ಪ್ರಶ್ನೆಗೆ ಉತ್ತರಿಸಿದ ಅವರು ಕೆಜಿಎಫ್‌ನ ಸ್ಥಗಿತಗೊಂಡಿರುವ ಬಿಜಿಎಂಎಲ್ ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕಾರ್ಮಿಕರ ಶ್ರೇಯೋಭಿವೃದ್ಧಿ ಕೇಂದ್ರ ಸರ್ಕಾರದ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ. ಈ ಪ್ರದೇಶದಲ್ಲಿ ಉಪಯೋಗಿಸದೆಯೇ ಉಳಿದಿರುವ ಜಮೀನಿನಲ್ಲಿ ತುಮಕೂರು ನಗರದ ಸಮೀಪದಲ್ಲಿ ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗಿರುವ ಚೆನ್ನೈ–ಬೆಂಗಳೂರು ಕೈಗಾರಿಕಾ ಪಡಸಾಲೆಯ ಮಾದರಿಯಲ್ಲಿ ಕೆಜಿಎಫ್‌ನಲ್ಲೂ ಕೈಗಾರಿಕಾ ಪಡಸಾಲೆ ಸ್ಥಾಪಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು.

ಇದಕ್ಕೆ ಸಂಬಂಧಿಸಿದಂತೆ 2018 ರ ನವೆಂಬರ್ 13 ರಂದು ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿದೆ. ಕೈಗಾರಿಕಾ ಅಭಿವೃದ್ಧಿ ಆಯುಕ್ತರು ಹಾಗೂ ಕೋಲಾರ ಜಿಲ್ಲಾಧಿಕಾರಿಯವರಿಗೆ ನಾಲ್ಕು ತಿಂಗಳೊಳಗಾಗಿ ಕೈಗಾರಿಕಾ ಪ್ರದೇಶ ಸ್ಥಾಪಿಸುವ ಜಮೀನು ಗುರುತಿಸಿ ಮಾಹಿತಿ ನೀಡಲು ಸೂಚಿಸಲಾಗಿದೆ ಎಂದು ಸಚಿವರು ವಿವರಿಸಿದರು.

**********

## ಕೃಷಿ ಇಲಾಖೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ : ಕೃಷಿ ಅಧಿಕಾರಿಗಳಿಗೆ ಬಡ್ತಿ

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):** ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರ ತಿದ್ದುಪಡಿ ತರುವ ಕುರಿತು ಪರಿಶೀಲಿಸಲಾಗುತ್ತಿದೆ. ಈ ಮೂಲಕ ಕೃಷಿ ಪದವೀಧರರಲ್ಲದ ಸಹಾಯಕ ಕೃಷಿ ಅಧಿಕಾರಿಗಳಿಗೆ ಮುಂಬಡ್ತಿ ನೀಡಲು ಆದ್ಯತೆ ನೀಡಲಾಗುವುದು ಎಂದು ಕೃಷಿ ಸಚಿವ ಎನ್. ಹೆಚ್. ಶಿವಶಂಕರ ರೆಡ್ಡಿ ಅವರು ರಾಜ್ಯ ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಶರಣಪ್ಪ ಮಟ್ಟೂರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಮುಂಬರುವ ಎರಡು ತಿಂಗಳ ಅವಧಿಯಲ್ಲಿ ಈ ಸಮಸ್ಯೆಗೆ ಪರಿಹಾರ ಕಂಡು ಕೊಳ್ಳಲಾಗುವುದು. ಸೇವಾ ಹಿರಿತನ ಹೊಂದಿರುವ ಕೃಷಿ ಪದವೀಧರರಲ್ಲದ ಸಹಾಯಕ ಕೃಷಿ ಅಧಿಕಾರಿಗಳಿಗೆ ಮುಂಬಡ್ತಿ ನೀಡಲಾಗುವುದು ಎಂದರು.

*************

**ವಾವಿಸಂ.**

## ಹಾಪ್‌ಕಾಮ್ಸ್ ಬಲವರ್ಧನೆಗೆ ಕ್ರಮ : ಸಚಿವ ಎಂ.ಸಿ. ಮನಗೂಳಿ

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):** ರಾಜ್ಯದ 22 ನಗರ ಪ್ರದೇಶಗಳಲ್ಲಿ 496 ಹಾಪ್‌ಕಾಮ್ಸ್ ಮಳಿಗೆಗಳು ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿವೆ. ಇವುಗಳ ಬಲವರ್ಧನೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತೋಟಗಾರಿಕೆ ಸಚಿವ ಎಂ.ಸಿ. ಮನಗೂಳಿ ಅವರು ವಿಧಾನಪರಿಷತ್‌ನಲ್ಲಿ ಹೇಳಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಪಿ. ಆರ್. ರಮೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಕರ್ನಾಟಕ ರಾಜ್ಯ ಸಹಕಾರಿ ತೋಟಗಾರಿಕಾ ಮಾರಾಟ ಮಹಾಮಂಡಳ (ಕೆ.ಎಚ್.ಎಫ್.) ರಾಜ್ಯಮಟ್ಟದ ಅಪೆಕ್ಸ್ ಸಹಕಾರಿ ಸಂಸ್ಥೆಯಾಗಿದೆ. ಅಲ್ಲದೆ, 22 ಜಿಲ್ಲಾ ಹಾಪ್‌ಕಾಮ್ಸ್‌ಗಳು ಸದಸ್ಯ ಸಂಘಗಳಾಗಿವೆ. ಸಹಕಾರ ಸಂಘಗಳ ಕಾಯ್ದೆ ಮತ್ತು ನಿಯಮದನ್ವಯ ತೋಟಗಾರಿಕೆ ಇಲಾಖೆಯ ಅಧೀನದಲ್ಲಿ

ಕಾರ್ಯನಿರ್ವಹಿಸುತ್ತಿವೆ. ಚುನಾಯಿತ ನಿರ್ದೇಶಕ ಮಂಡಳಿಯಿಂದ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ಆಯ್ಕೆ ಮಾಡಲಾಗುತ್ತಿದೆ. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ವ್ಯಾಪಾರಸ್ಥರು ಮತ್ತು ದಲ್ಲಾಳಿಗಳ ಮೂಲಕ ರೈತರ ಕೃಷಿ ಹಾಗೂ ತೋಟಗಾರಿಕಾ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತದೆ. ಹಾಪ್‌ಕಾಮ್ಸ್ ಸಂಸ್ಥೆಗಳಲ್ಲಿ ತೋಟಗಾರಿಕೆ ಉತ್ಪನ್ನಗಳನ್ನು ಸದಸ್ಯ ಅಥವಾ ಸಹ ಸದಸ್ಯ ರೈತರಿಂದ ಸಂಸ್ಥೆಯೇ ಖರೀದಿಸಿ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಮಾರಾಟ ಮಾಡಲಾಗುತ್ತದೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.

*************

## ಪರಿಶಿಷ್ಟ ಪಂಗಡಕ್ಕೆ ಕುಣಬಿ ಜನಾಂಗ,
## ಮೂರು ತಿಂಗಳೊಳಗೆ ಕೇಂದ್ರಕ್ಕೆ ಹೆಚ್ಚುವರಿ ಮಾಹಿತಿ : ಸಚಿವ ಪ್ರಿಯಾಂಕ್ ಖರ್ಗೆ

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):** ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು 2017 ರಲ್ಲಿ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿತ್ತು. ಆದರೆ, ಕೇಂದ್ರ ಗೃಹ ಮಂತ್ರಾಲಯವು ರಾಜ್ಯ ಸರ್ಕಾರದ ಈ ಪ್ರಸ್ತಾವನೆಗೆ ಬೆಂಬಲ ನೀಡಿರುವುದಿಲ್ಲ. ಭಾರತದ ಮಹಾ ವಿಲೇಖನಾಧಿಕಾರಿ ( ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ) ಅವರ ಪರಿಶೀಲನಾ ಅಂಶಗಳ ಬಗ್ಗೆ ಮೂರು ತಿಂಗಳೊಳಗೆ ಕೇಂದ್ರ ಸರ್ಕಾರಕ್ಕೆ ಹೆಚ್ಚುವರಿ ಮಾಹಿತಿ ಒದಗಿಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಪ್ರಿಯಾಂಕ್ ಖರ್ಗೆ ಅವರು ಮೇಲ್ಮನೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಶ್ರೀಕಾಂತ ಘೋಟ್ನೆಕರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಭಾರತ ಸಂವಿಧಾನದ ಅನುಚ್ಛೇದ 342 (1) ಪ್ರಕಾರ ಯಾವುದೇ ಜಾತಿಯನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರ್ಪಡೆ ಮಾಡಲು, ತೆಗೆದುಹಾಕಲು ಅಥವಾ ಮಾರ್ಪಾಟು ಮಾಡಲು ಭಾರತ ಸರ್ಕಾರ ಸಕ್ಷಮ ಪ್ರಾಧಿಕಾರವಾಗಿರುತ್ತದೆ. ಕುಣಬಿ ಸಮುದಾಯವನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸುವ ಬಗ್ಗೆ ಕುಲಶಾಸ್ತ್ರೀಯ ಅಧ್ಯಯನವನ್ನು ನಡೆಸಿ ಈ ಸಮುದಾಯವನ್ನು ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕೇಂದ್ರಕ್ಕೆ ದಿನಾಂಕ : 10-10-2017 ರಂದು ಶಿಫಾರಸ್ಸು ಮಾಡಲಾಗಿತ್ತು.

ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯವು ಇದಕ್ಕೆ ಬೆಂಬಲ ನೀಡದ ಕಾರಣ ಮೂರು ತಿಂಗಳ ಅವಧಿಯಲ್ಲಿ ಮೈಸೂರಿನ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ಅವರ ಪರಿಶೀಲನೆಯ ಅಂಶಗಳ ಸೂಕ್ತ ಸಮರ್ಥನೆ ಮತ್ತು ಹೆಚ್ಚುವರಿ ವಿವರಗಳನ್ನು ಪಡೆದು ಕೇಂದ್ರಕ್ಕೆ ಕಳುಹಿಸಲಾಗುವುದು ಎಂದು ಸಚಿವರು ತಿಳಿಸಿದರು.

**************

ವಾವಿಸಂ

## ಗಂಗಾ ಕಲ್ಯಾಣ ಯೋಜನೆಯ ಅನುಷ್ಠಾನದಲ್ಲಿ
## ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ : ಪ್ರಿಯಾಂಕ್ ಖರ್ಗೆ

**ಬೆಳಗಾವಿ: ಡಿಸೆಂಬರ್ 17:(ಕರ್ನಾಟಕ ವಾರ್ತೆ):** ಗಂಗಾ ಕಲ್ಯಾಣ ಯೋಜನೆಯ ಅನುಷ್ಠಾನದಲ್ಲಿ ಲೋಪವೆಸಗಿರುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಿ ಇಲಾಖೆಯ ವಿಶ್ವಾಸಾರ್ಹತೆ

ಹೆಚ್ಚಿಸಲಾಗುವುದು. ಇಲಾಖೆಯ ಹಿರಿಯ ಸಲಹೆಗಾರರಾಗಿರುವ ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಚನೆಯಾಗಿರುವ ಸಮಿತಿಯು ಈ ಕುರಿತು ವಿಚಾರಣೆ ನಡೆಸುತ್ತಿದೆ. ರಾಜ್ಯ ವಿಧಾನ ಮಂಡಲದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮಿತಿಯು ಕೂಡಾ ಯೋಜನೆ ಅನುಷ್ಠಾನದ ಬಗ್ಗೆ ವಿಶೇಷ ಒತ್ತು ನೀಡಿ ಕೂಲಂಕಷ ವಿಚಾರಣೆ ಮಾಡಬಹುದು ಎಂದು ಸಮಾಜ ಕಲ್ಯಾಣ ಸಚಿವ ಪ್ರಿಯಾಂಕ್ ಖರ್ಗೆ ಅವರು ವಿಧಾನ ಪರಿಷತ್‌ನಲ್ಲಿ ಇಂದು ಹೇಳಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಂ. ಕೆ. ಪ್ರಾಣೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ಮೈಸೂರು ಜಿಲ್ಲೆಗಳಲ್ಲಿ ಗಂಗಾ ಕಲ್ಯಾಣ ಯೋಜನೆ ಅನುಷ್ಠಾನದಲ್ಲಿ ದೂರುಗಳು ಬಂದಿದ್ದವು. ಈ ಪ್ರಕರಣಗಳಲ್ಲಿ ಇಲಾಖಾ ವಿಚಾರಣೆ ನಡೆಸಿ ಮೂವರು ಅಧಿಕಾರಿಗಳ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ತಡೆಹಿಡಿಯಲಾಗಿದೆ. ಒಬ್ಬರನ್ನು ಅಮಾನತ್ತು ಮಾಡಲಾಗಿದೆ. ಒಬ್ಬರನ್ನು ಸೇವೆಯಿಂದ ವಜಾಗೊಳಿಸಲಾಗಿದೆ. ಇಬ್ಬರು ಅಧಿಕಾರಿಗಳ ವಿರುದ್ಧ ವಿಚಾರಣೆ ನಡೆಯುತ್ತಿದೆ. ಯಾವುದಾದರೂ ನಿರ್ಧಿಷ್ಟ ಪ್ರಕರಣಗಳ ಬಗ್ಗೆ ಮಾಹಿತಿ ನೀಡಿದರೆ ವಿಚಾರಣೆ ನಡೆಸಿ ಕ್ರಮ ಕೈಗೊಳ್ಳಲಾಗುವುದು. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯಲು ಗಂಭೀರ ಕ್ರಮ ತೆಗೆದುಕೊಳ್ಳಲಾಗುವುದು. ಪಾರದರ್ಶಕವಾಗಿ ದರ ನಿಗದಿಗೊಳಿಸಲಾಗುವುದು ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.

ಸಚಿವರ ಉತ್ತರದಿಂದ ಸಮಾಧಾನಗೊಳ್ಳದ ಪ್ರತಿಪಕ್ಷದ ಸದಸ್ಯರು ಈ ಕುರಿತು ವಿಚಾರಣೆ ನಡೆಸಲು ಜಂಟಿ ಸದನ ಸಮಿತಿ ರಚಿಸಬೇಕು. ಇಲ್ಲವೇ ಅರ್ಧ ಗಂಟೆ ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಪಟ್ಟು ಹಿಡಿದು ಸದನದ ಬಾವಿಗಿಳಿದು ಧರಣಿ ಆರಂಭಿಸಿದರು. ಸದನದಲ್ಲಿ ಗದ್ದಲ ವಾತಾವರಣ ನಿರ್ಮಾಣವಾದ್ದರಿಂದ ಸಭಾಪತಿ ಕೆ. ಪ್ರತಾಪ್‌ಚಂದ್ರ ಶೆಟ್ಟಿಯವರು ಸದನವನ್ನು ಅರ್ಧಗಂಟೆ ಕಾಲ ಮುಂದೂಡಿದರು.

ಸದನ ಮರುಸಮಾವೇಶಗೊಂಡ ಬಳಿಕ ಪ್ರತಿಪಕ್ಷದ ಸದಸ್ಯರು ಧರಣಿ ಮುಂದುವರೆಸಿದರು. ಸಮಾಜ ಕಲ್ಯಾಣ ಸಚಿವ ಪ್ರಿಯಾಂಕ್ ಖರ್ಗೆ ಅವರು ಪ್ರತಿಪಕ್ಷದ ನಾಯಕ ಕೋಟ ಶ್ರೀನಿವಾಸ ಪೂಜಾರಿ ಅವರ ಸಲಹೆಯಂತೆ ಈ ವಿಷಯಕ್ಕಾಗಿ ಪ್ರತ್ಯೇಕ ಅರ್ಧಗಂಟೆ ಚರ್ಚೆಗೆ ಅವಕಾಶ ಕಲ್ಪಿಸಬಹುದು ಎಂದು ಸಭಾಪತಿಯವರಲ್ಲಿ ಮನವಿ ಮಾಡಿದರು.

ಸಭಾಪತಿ ಕೆ. ಪ್ರತಾಪ್‌ಚಂದ್ರ ಶೆಟ್ಟಿ ಅವರು ಗಂಗಾ ಕಲ್ಯಾಣ ಯೋಜನೆಯ ಅನುಷ್ಠಾನ ಕುರಿತು ಚರ್ಚೆಗೆ ಪ್ರತ್ಯೇಕ ಅರ್ಧ ಗಂಟೆ ಸಮಯಾವಕಾಶ ಕಲ್ಪಿಸುವುದಾಗಿ ಪ್ರಕಟಿಸಿದರು. ಆಗ ಪ್ರತಿಪಕ್ಷದ ಸದಸ್ಯರು ಧರಣಿ ಮೊಟಕುಗೊಳಿಸಿ ಮತ್ತೆ ಕಲಾಪದಲ್ಲಿ ಪಾಲ್ಗೊಂಡರು.

****************

ವಾವಿಸಂ

## ಬೇಡಿಕೆ ಹಾಗೂ ಅನುದಾನ ಲಭ್ಯತೆ ಆಧರಿಸಿ ಹೊಸ ವಿದ್ಯಾರ್ಥಿನಿಲಯ ಮಂಜೂರು : ಸಿ. ಪುಟ್ಟರಂಗಶೆಟ್ಟಿ

**ಬೆಳಗಾವಿ: ಡಿಸೆಂಬರ್ 17:(ಕರ್ನಾಟಕ ವಾರ್ತೆ):** ಹೊಸ ವಿದ್ಯಾರ್ಥಿ ನಿಲಯ ಮಂಜೂರಾತಿಗೆ ಸರ್ಕಾರವು ಹೊಸ ಮಾರ್ಗಸೂಚಿಗಳನ್ನು ಜಾರಿಗೊಳಿಸಿದೆ. ರಾಜ್ಯದ ಒಟ್ಟಾರೆ ಬೇಡಿಕೆ ಮತ್ತು ಅನುದಾನ ಲಭ್ಯತೆ

ಆಧರಿಸಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಸಿ. ಪುಟ್ಟರಂಗಶೆಟ್ಟಿ ಅವರು ವಿಧಾನ ಪರಿಷತ್‌ನಲ್ಲಿ ಹೇಳಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಅರುಣ್ ಶಹಾಪೂರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಒಟ್ಟು 2438 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳಲ್ಲಿ 1300 ಮೆಟ್ರಿಕ್ ಪೂರ್ವ ಮತ್ತು 1138 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿವೆ.

ಅಲ್ಲದೆ, 1308 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ, 74 ವಿದ್ಯಾರ್ಥಿ ನಿಲಯಗಳು ಉಚಿತ ಕಟ್ಟಡಗಳಲ್ಲಿ ಹಾಗೂ 1056 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ 246 ಹೊಸ ವಿದ್ಯಾರ್ಥಿ ನಿಲಯಗಳ ಮಂಜೂರಾತಿಗೆ ಅರ್ಜಿಗಳು ಸ್ವೀಕೃತವಾಗಿವೆ. ವಿಜಯಪುರ ಜಿಲ್ಲೆ ಸಿಂದಗಿ ತಾಲೂಕಿನ ತಿಳಗೋಳ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ವಸತಿನಿಲಯವನ್ನು ಪ್ರಾರಂಭಿಸಲು ಹೊಸ ಮಾರ್ಗಸೂಚಿಗಳನ್ವಯ ಪರಿಶೀಲನೆ ನಡೆಸಿ ಪ್ರಸ್ತಾವನೆ ಸಲ್ಲಿಸುವಂತೆ ಅಲ್ಲಿನ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೂಚಿಸಲಾಗಿದೆ. ಬಿಂಜಲಭಾವಿ ಗ್ರಾಮದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು ಈ ಹಿಂದೆ ತಿಳಗೋಳ ಗ್ರಾಮಕ್ಕೆ ವರ್ಗಾವಣೆ ಮಾಡಲಾಗಿತ್ತು. ಪುನಃ ಈ ಆದೇಶ ಮಾರ್ಪಾಡಿಸಿ ಬಿಂಜಲಭಾವಿ ಗ್ರಾಮದಲ್ಲಿಯೇ ವಸತಿ ನಿಲಯವನ್ನು ಮುಂದುವರೆಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಸರ್ಕಾರಿ ವಸತಿ ನಿಲಯಗಳ ಸ್ಥಿತಿಗತಿ ಸುಧಾರಣೆಗೆ ಒತ್ತು ನೀಡಬೇಕು ಎಂದು ಸದಸ್ಯರು ಒತ್ತಾಯಿಸಿದಾಗ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ ಅವರು ನಿವೃತ್ತ ಅಪರ ಮುಖ್ಯಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿ ಈ ಕುರಿತು ಅಧ್ಯಯನ ನಡೆಸುತ್ತಿದೆ. ನಾಳೆ ಡಿಸೆಂಬರ್ 18 ರಂದು ಸಮಿತಿ ಸಭೆ ನಡೆಯಲಿದೆ. ಪ್ರತಿಪಕ್ಷಗಳ ಸದಸ್ಯರೂ ಕೂಡಾ ಸಭೆಗೆ ಆಗಮಿಸಿ ಸಲಹೆ ನೀಡಬಹುದು ಎಂದು ಆಹ್ವಾನವಿತ್ತರು.

*****************

ವಾವಿಸಂ

## ಅಡಿಕೆ ಮಂಡಳಿ ರಚನೆಗೆ ಕ್ರಮ

**ಬೆಳಗಾವಿ: ಡಿಸೆಂಬರ್ 17:(ಕರ್ನಾಟಕ ವಾರ್ತೆ):** ಅಡಿಕೆ ಬೆಳೆಯ ಮೇಲೆ ಅವಲಂಬಿತರಾಗಿರುವ ಸಣ್ಣ, ಅತಿಸಣ್ಣ ರೈತರ ಕ್ಷೇಮಾಭಿವೃದ್ಧಿಗೆ ಪ್ರತ್ಯೇಕ ಅಡಿಕೆ ಮಂಡಳಿ ಅವಶ್ಯಕವಾಗಿದೆ._ತೋಟಗಾರಿಕೆ ಇಲಾಖೆ ಮತ್ತು ವಿಶ್ವವಿದ್ಯಾಲಯ ನೀಡಿದ ವರದಿಯ ಸಾಧಕ ಬಾಧಕಗಳನ್ನು ಪರಾಮರ್ಶಿಸಿ ಮಂಡಳಿ ರಚನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತೋಟಗಾರಿಕೆ ಸಚಿವ ಎಂ.ಸಿ. ಮನಗೂಳಿ ವಿಧಾನಪರಿಷತ್‌ನಲ್ಲಿ ಇಂದು ಪ್ರಕಟಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಐವನ್ ಡಿಸೋಜಾ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಅಡಿಕೆ ಬೆಳೆಯಲ್ಲಿ ಮೌಲ್ಯವರ್ಧನೆ, ಉತ್ಪನ್ನ, ವೈವಿಧ್ಯೀಕರಣ ಹಾಗೂ ಅಡಿಕೆಯ ಪರ್ಯಾಯ ಬಳಕೆಗೆ ಸಂಬಂಧಿಸಿದಂತೆ ಸಂಶೋಧನೆಗೆ ಒತ್ತು ನೀಡುವುದು.

ರೈತರು ಎದುರಿಸುತ್ತಿರುವ ಕಾನೂನಾತ್ಮಕ ಸಮಸ್ಯೆಗಳು, ರೋಗ ಮತ್ತು ಕೀಟ ನಿರ್ವಹಣೆಗೆ ಕ್ರಮ ಕೈಗೊಳ್ಳುವುದು. ಅಡಿಕೆಗೆ ಉದ್ಯಮದ ಸ್ಥಾನಮಾನ ಒದಗಿಸಿ

ರಫ್ತು ಮೂಲಕ ವಿದೇಶಿ ವಿನಿಮಯ ಮಾರುಕಟ್ಟೆ ಕಲ್ಪಿಸಿ ಬೆಲೆ ಸ್ಥಿರೀಕರಣಗೊಳಿಸಲು ಅಡಿಕೆ ಮಂಡಳಿ ರಚನೆ ಅವಶ್ಯ ಎಂದು ಅಭಿಪ್ರಾಯಪಡಲಾಗಿದೆ. ಮಂಡಳಿ ರಚನೆಗೆ ಕೇಂದ್ರ ಸರ್ಕಾರದಿಂದ ಅನುದಾನ ನೀಡಲಾಗುತ್ತಿಲ್ಲ ಎಂದು ಸಚಿವರು ತಿಳಿಸಿದರು.

*****************

ವಾವಿಸಂ

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿ ಸಿದ್ಧತೆ ಪ್ರಗತಿಯಲ್ಲಿದೆ: ಸಿ.ಪುಟ್ಟರಂಗಶೆಟ್ಟಿ

**ಬೆಳಗಾವಿ: ಡಿಸೆಂಬರ್ 17:(ಕರ್ನಾಟಕ ವಾರ್ತೆ):** ಹಿಂದುಳಿದ ವರ್ಗಗಳನ್ನು ಗುರುತಿಸಿ ಅವುಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಉದ್ದೇಶದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗಿದೆ. ಸಂಗ್ರಹಿಸಿದ ಅಂಕಿ-ಅಂಶಗಳನ್ನು ಗಣಕೀಕರಣಗೊಳಿಸಲಾಗಿದೆ. ಮಾಹಿತಿ ವಿಶ್ಲೇಷಣೆ ಮತ್ತು ವರದಿ ಸಿದ್ಧಪಡಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಸಿ. ಪುಟ್ಟರಂಗಶೆಟ್ಟಿ ಅವರು ಮೇಲ್ಮನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಸದಸ್ಯ ರಘುನಾಥ ರಾವ್ ಮಲ್ಕಾಪೂರೆ ಅವರ ಪ್ರಶ್ನೆಗೆ ಲಿಖಿತ ಉತ್ತರ ಒದಗಿಸಿರುವ ಸಚಿವರು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 2015 ರ ಏಪ್ರೀಲ್ 11 ರಿಂದ ಪ್ರಾರಂಭಿಸಿ 2015 ರ ಮೇ 30 ಕ್ಕೆ ಪೂರ್ಣಗೊಳಿಸಿದೆ. ಈ ಸಮೀಕ್ಷೆಗಾಗಿ 158.47 ಕೋಟಿ.ರೂ. ವೆಚ್ಚ ಮಾಡಲಾಗಿದೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ 1995 ರ ಪ್ರಕರಣ 9 (2) ಮತ್ತು 11 (1) ಪ್ರಕಾರ ಹತ್ತು ವರ್ಷಗಳಿಗೊಮ್ಮೆ ಸಮೀಕ್ಷೆ ನಡೆಸಬೇಕಾಗಿದೆ. ದೇಶದಲ್ಲಿ ಪ್ರಥಮ ಬಾರಿಗೆ ನಮ್ಮ ರಾಜ್ಯದಲ್ಲಿ ಈ ಕಾರ್ಯ ಕೈಗೊಳ್ಳಲಾಗಿದೆ. ಹಿಂದುಳಿದ ವರ್ಗಗಳನ್ನು ಗುರುತಿಸಿ ಅವುಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ಸುಧಾರಣೆಗೆ ಕಾರ್ಯಕ್ರಮಗಳನ್ನು ರೂಪಿಸಲು ಈ ಸಮೀಕ್ಷೆ ಆಧಾರವಾಗಲಿದೆ. ಆಯೋಗವು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಿದೆ ಎಂದು ಸಚಿವರು ತಮ್ಮ ಉತ್ತರದಲ್ಲಿ ತಿಳಿಸಿದ್ದಾರೆ.

**************

## ಕರ್ನಾಟಕ ಆಡಳಿತ ಮಂಡಳಿಗೆ ಜನವರಿ ಅಂತ್ಯದೊಳಗೆ ಐದು ಸದಸ್ಯರ ಭರ್ತಿ: ಕೃಷ್ಣಭೈರೇಗೌಡ ಭರವಸೆ

**ಬೆಳಗಾವಿ: ಡಿಸೆಂಬರ್ 17 :(ಕರ್ನಾಟಕ ವಾರ್ತೆ):** ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಗೆ ಐದು ಸದಸ್ಯರನ್ನು ನೇಮಿಸುವ ಪ್ರಸ್ತಾವವನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದ್ದು, ಜನವರಿ ಅಂತ್ಯದೊಳಗೆ ಭರ್ತಿ ಮಾಡಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣಭೈರೇಗೌಡ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಇಂದು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಪೀಠ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಎರಡು ಪೀಠಗಳು ಉತ್ತರ ಕರ್ನಾಟಕ ಭಾಗದಲ್ಲಿ ಕಾರ್ಯನಿರ್ವಹಿಸುವ ಸಲುವಾಗಿ ನ್ಯಾಯಮಂಡಳಿಗೆ ಐದು ಸದಸ್ಯರನ್ನು ನೇಮಿಸುವ ಪ್ರಸ್ತಾವವನ್ನು ಕೇಂದ್ರ ಗೃಹ ಇಲಾಖೆ ಹಾಗೂ ಕಾನೂನು ಇಲಾಖೆಗೆ ಒಂದೂವರೆ ತಿಂಗಳ ಹಿಂದೆ ಕಳುಹಿಸಲಾಗಿದೆ. ಶೀಘ್ರವೇ ಕೇಂದ್ರ ಸರ್ಕಾರ ಇದಕ್ಕೆ ಒಪ್ಪಿಗೆ ನೀಡಲಿದ್ದು, ಜನವರಿ ಅಂತ್ಯದೊಳಗೆ ಐದು ಸದಸ್ಯರನ್ನು ಭರ್ತಿ ಮಾಡಲಾಗುವುದು. ಈ ಮೂಲಕ ಆಡಳಿತ ನ್ಯಾಯಮಂಡಳಿಯ ಬೆಳಗಾವಿ ಮತ್ತು ಕಲಬುರ್ಗಿ ಪೀಠಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸಲಿವೆ ಎಂದು ಹೇಳಿದರು.

2015 ರಲ್ಲಿ ಬೆಳಗಾವಿ ಮತ್ತು ಕಲಬುರ್ಗಿಯಲ್ಲಿ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಪೀಠಗಳನ್ನು ಸ್ಥಾಪಿಸಲು ಸರ್ಕಾರ ನಿರ್ಧಾರ ಕೈಗೊಂಡಿತ್ತು. ಅದರಂತೆ ಇಂದು ಬೆಳಗಾವಿ ಪೀಠ ಉದ್ಘಾಟನೆಗೊಂಡು ಇಂದಿನಿಂದಲೇ ಕಾರ್ಯ ನಿರ್ವಹಿಸಲಿದೆ. ಇನ್ನೆರಡು ವಾರಗಳಲ್ಲಿ ಕಲಬುರ್ಗಿ ನ್ಯಾಯ ಮಂಡಳಿ ಪೀಠವು ಉದ್ಘಾಟನೆಗೊಳ್ಳಲಿದೆ ಎಂದು ಸಚಿವರು ಭರವಸೆ ನೀಡಿದರು.

ಉತ್ತರ ಕರ್ನಾಟಕ ಭಾಗಕ್ಕೆ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಎರಡೂ ಪೀಠಗಳು ಕಾರ್ಯನಿರ್ವಹಿಸುತ್ತಿರುವುದರಿಂದ ಈ ಭಾಗದ ಪ್ರಕರಣಗಳು ಶೀಘ್ರ ಗತಿಯಲ್ಲಿ ಇತ್ಯರ್ಥವಾಗಲು ಅನುಕೂಲವಾಗಿದೆ. ಈ ಮೂಲಕ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ ಜನರ ಬಳಿಗೆ ಆಡಳಿತ ವ್ಯವಸ್ಥೆಯನ್ನು ಕೊಂಡೊಯ್ದಿದೆ ಎಂದು ಅವರು ತಿಳಿಸಿದರು.

ಬೆಳಗಾವಿ ಉತ್ತರ ವಿಧಾನಸಭೆ ಕ್ಷೇತ್ರದ ಶಾಸಕ ಅನಿಲ ಬೆನಕೆ ಮಾತನಾಡಿ, ಕರ್ನಾಟಕ ರಾಜ್ಯ ನ್ಯಾಯ ಮಂಡಳಿ ಬೆಳಗಾವಿ ಪೀಠ ಸ್ಥಾಪನೆ ಮಾಡಬೇಕೆಂಬ ಉದ್ದೇಶದಿಂದ ನಡೆದ ಹೋರಾಟಕ್ಕೆ ಜಯ ಸಂದಿದೆ. ಈ ಹಂತದಲ್ಲಿ ಹೋರಾಟದಲ್ಲಿ ಭಾಗಿಯಾದ ಹಲವಾರು ವಕೀಲರ ಮೇಲೆ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಪ್ರಕರಣಗಳನ್ನು ಹಿಂಪಡೆಯುವಂತೆ ಸರ್ಕಾರಕ್ಕೆ ಮನವಿ ಮಾಡಿದರು. ಅಲ್ಲದೇ ನ್ಯಾಯ ಮಂಡಳಿ ಪೀಠಕ್ಕೆ ಸ್ವಂತ ಕಟ್ಟಡ ಶೀಘ್ರದಲ್ಲಿ ಒದಗಿಸುವಂತೆ ಅವರು ಸಚಿವರ ಗಮನಕ್ಕೆ ತಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ ಅಧ್ಯಕ್ಷ ನ್ಯಾಯಮೂರ್ತಿ ಡಾ.ಕೆ. ಭಕ್ತವತ್ಸಲ ಮಾತನಾಡಿ, ಉತ್ತರ ಕರ್ನಾಟಕ ಭಾಗದಲ್ಲಿ ನ್ಯಾಯಮಂಡಳಿ ಪೀಠ ಸ್ಥಾಪನೆಗೆ ಹೋರಾಟಗಳು ನಡೆದಿದ್ದವು. ಅದರ ಪ್ರತಿಫಲವಾಗಿ ಇಂದು ಸುಸಜ್ಜಿತ ನ್ಯಾಯಪೀಠ ಉದ್ಘಾಟನೆಗೊಂಡಿದ್ದು, ಇಂದಿನಿಂದಲೇ ಪೀಠ ಕರ್ತವ್ಯ ನಿರ್ವಹಿಸಲಿದೆ. ಎಲ್ಲರಿಗೂ ನ್ಯಾಯ ಸಿಗುವ ನಿಟ್ಟಿನಲ್ಲಿ ನ್ಯಾಯಮಂಡಳಿ ಕಾರ್ಯ ನಿರ್ವಹಿಸಲಿದ್ದು, ಇದರ ಸದ್ಬಳಕೆ ಆಗಬೇಕು ಎಂದರು.

ಸರ್ಕಾರದ ಮುಖ್ಯ ಸಚೇತಕ ಗಣೇಶ್ ಪ್ರಕಾಶ ಹುಕ್ಕೇರಿ ಉಪಸ್ಥಿತರಿದ್ದರು. ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ರಿಜಿಸ್ಟ್ರಾರ್ ರಾಜನ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕರ್ನಾಟಕ ಸರ್ಕಾರ ಮುಖ್ಯ ಕಾರ್ಯದರ್ಶಿ ಟಿ.ಎನ್. ವಿಜಯಭಾಸ್ಕರ್ ಸ್ವಾಗತಿಸಿದರು. ಬೆಳಗಾವಿ ವಕೀಲರ ಸಂಘದ ಅಧ್ಯಕ್ಷ ಎಸ್.ಎಸ್. ಕಿವಡಸಣ್ಣವರ್ ವಂದಿಸಿದರು.

**************